



ಅರುಣ ಪಿ. ಭಟ್ಟ

# ವಾರಭವಿಷ್ಯ: 30.04.2026ರಿಂದ 06.05.2026ರವರೆಗೆ




ವಾರದ ಶುರುವಿನಲ್ಲಿ ಉತ್ತಮವಾದ ಹಣದ ಹರಿವು. ವರ್ಚಸ್ಸು ವೃದ್ಧಿ ಆಗಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ನಿರೀಕ್ಷೆಗಿಂತ ಹೆಚ್ಚಿನ ಪ್ರಗತಿ. ಹೆಚ್ಚಿನ ಹಣ ಖರ್ಚಾಗಲಿದೆ. ಶತ್ರುಗಳ ಉಪಟಳ ಹೆಚ್ಚಾಗಲಿದೆ. ಇದರಿಂದ ಮಾನಸಿಕ ಆತಂಕಕ್ಕೆ ಗುರಿಯಾಗುತ್ತೀರಿ. ಮೂರು ದಿನ ಅನುಕೂಲ ಸನ್ನಿವೇಶ ಇದೆ. ಆಸ್ತಿ ಖರೀದಿಗೆ ಅವಕಾಶಗಳು ಸಿಗಲಿವೆ. ಉದ್ದೇಶಿತ ಕಾರ್ಯ ಈಡೇರುತ್ತದೆ. ಶುಭದಿನ: 04. ಶ್ರೀರಾಜರಾಜೇಶ್ವರಿ ಜಪ ಮಾಡಿರಿ.




ವಾರದ ಆರಂಭದಲ್ಲಿ ಉದ್ಯೋಗ ಸ್ಥಳದಲ್ಲಿ ಏಳ್ಗೆ ಇದೆ. ನಿಮ್ಮ ಆರೋಗ್ಯ ಉತ್ತಮವಾಗಿ ಇರಲಿದೆ. ಮನೆಯಲ್ಲಿ ಸಂತೋಷದ ವಾತಾವರಣ ಇರುತ್ತದೆ. ಕೆಲಸದ ಮಧ್ಯೆಯೂ ಸಂಗಾತಿ ಮಕ್ಕಳ ಜತೆಗೆ ಸಮಯ ಕಳೆಯಲಿದ್ದೀರಿ. ನಿರೀಕ್ಷೆ ಮಾಡಿದ್ದಕ್ಕಿಂತ ಹೆಚ್ಚಿನ ಅನುಕೂಲ ನಿಮಗೆ ಒದಗಿಬರಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ನೀವು ಹಾಕಿದ್ದ ಶ್ರಮಕ್ಕೆ ತಕ್ಕ ಫಲ ದೊರೆಯಲಿದೆ. ಶುಭದಿನ: 01. ಶ್ರೀರಾಮರಕ್ಷಾಸ್ತೋತ್ರ ಪಠಿಸಿರಿ.




ಮನೆಯಲ್ಲಿ ದೇವತಾ ಆರಾಧನೆ ಕಾರ್ಯಕ್ರಮ ನೆರವೇರಬಹುದು. ಸಾಮಾಜಿಕ ಚಟುವಟಿಕೆಯಲ್ಲಿ ಪಾಲ್ಗೊಳ್ಳಲಿದ್ದೀರಿ. ಅಗತ್ಯ ಇರುವವರಿಗೆ ನೆರವು ಕೂಡ ನೀಡಲಿದ್ದೀರಿ. ಆದಾಯದಲ್ಲಿ ಹೆಚ್ಚಳ ಆಗುವ ಸಾಧ್ಯತೆ. ಮನೆಯ ವಿಚಾರದಲ್ಲಿ ಗಮನಹರಿಸಬೇಕಾಗುತ್ತದೆ. ವೃತ್ತಿನಿರತರು ಹೆಚ್ಚು ಚಟುವಟಿಕೆಗಳಲ್ಲಿ ತೊಡಗುವ ಸಾಧ್ಯತೆ ಇದೆ. ಪ್ರಗತಿಯ ಹಾದಿಯಲ್ಲಿ ಸಾಗಲಿದ್ದೀರಿ. ಶುಭದಿನ: 30. ಸೌಂದರ್ಯ ಲಹರಿ ಪಠಿಸಿರಿ.




ಉದ್ಯೋಗಕ್ಕೆ ಹೊರತಾದ ಕೆಲಸಗಳನ್ನು ಪೂರೈಸುವುದಕ್ಕೇ ವಾರದ ಶುರುವಿನಲ್ಲಿ ಸಮಯ ನೀಡಬೇಕಾಗುತ್ತದೆ. ಹಣ ಹೂಡಿಕೆಯಲ್ಲಿ ಉತ್ತಮ ಪ್ರಗತಿ. ಹೆಚ್ಚು ಹಣ ಖರ್ಚಾಗುತ್ತದೆ. ಉದ್ಯೋಗ ಸ್ಥಳದಲ್ಲಿ ಅಂದುಕೊಂಡ ಸ್ಥಾನಮಾನ ಪಡೆಯಲು ಕಾನೂನು ವಿಚಾರಕ್ಕೆ ಸಂಬಂಧಿಸಿದ ಜವಾಬ್ದಾರಿಗಳನ್ನು ಪೂರೈಸಲು ಗಮನ ನೀಡಬೇಕಾಗುತ್ತದೆ. ಸಂಗಾತಿ ನಿಮ್ಮ ಬಗ್ಗೆ ಸಿಟ್ಟಾಗಬಹುದು. ಶುಭದಿನ: 02. ಲಿಂಗಾಷ್ಟಕ ಪಠಿಸಿರಿ




ದಾಂಪತ್ಯ ಸಂತೋಷವಾಗಿ ಇರುತ್ತದೆ. ಸಂಬಂಧದಲ್ಲಿ ಬಾಂಧವ್ಯ ಇನ್ನಷ್ಟು ಗಟ್ಟಿಯಾಗುತ್ತದೆ. ವ್ಯಾಪಾರಿಗಳು ಉದ್ಯಮಿಗಳು ಬಹುಕಾಲದ ಯೋಜನೆಗಳನ್ನು ಅನುಷ್ಠಾನಕ್ಕೆ ತರಲಿದ್ದೀರಿ. ಭವಿಷ್ಯದಲ್ಲಿ ದೊಡ್ಡ ಮಟ್ಟದ ಉಪಯೋಗ ಆಗಲಿದೆ. ಪ್ರವಾಸಕ್ಕೆ ತೆರಳುವ ಸಾಧ್ಯತೆ ಇದೆ. ಆಹಾರ ಪಥ್ಯದಲ್ಲಿ ನಿಗಾ ವಹಿಸಿ. ವಾರದ ಅಂತ್ಯಕ್ಕೆ ಸಾಮಾಜಿಕವಾಗಿ ವರ್ಚಸ್ಸು ಹೆಚ್ಚಾಗಲಿದೆ. ಶುಭದಿನ: 03. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ನಿಮ್ಮ ಕೆಲಸ ಕಾರ್ಯಗಳನ್ನು ಪೂರ್ಣಗೊಳಿಸಲು ಬಹಳ ಶ್ರಮ ಪಡುತ್ತೀರಿ. ನಿಮ್ಮ ಆತ್ಮವಿಶ್ವಾಸದಲ್ಲಿ ಕುಂದುಂಟಾಗುವುದಿಲ್ಲ. ಅಗತ್ಯ ವಸ್ತುಗಳ ಖರೀದಿಗೆ ಹೆಚ್ಚಿನ ಹಣ ವ್ಯಯ ಮಾಡಲಿದ್ದೀರಿ. ಹಣದ ಅಗತ್ಯವನ್ನು ಪೂರೈಸಿಕೊಳ್ಳುವ ಸಲುವಾಗಿ ಸಾಲಕ್ಕಾಗಿ ಅರ್ಜಿ ಹಾಕಿಕೊಳ್ಳಲಿದ್ದೀರಿ. ನಿಮ್ಮ ಕರ್ತವ್ಯವನ್ನು ಪೂರ್ಣಗೊಳಿಸುವ ಕಡೆಗೆ ಹೆಚ್ಚಿನ ಗಮನ ವಹಿಸಲಿದ್ದೀರಿ. ಶುಭದಿನ: 01. ವಿಷ್ಣು ಸಹಸ್ರನಾಮ ಪಠಿಸಿರಿ.




ನಾನಾ ಆದಾಯ ಮೂಲದಿಂದ ಹಣಕಾಸಿನ ಹರಿವು ಹೆಚ್ಚಾಗಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಉತ್ತಮವಾದ ಏಳ್ಗೆ ಇದೆ. ಮಕ್ಕಳ ಪ್ರಗತಿಯಿಂದ ಸಂತೋಷ. ವೈವಾಹಿಕ ಜೀವನದಲ್ಲಿ ಸಂತೋಷ ಇರುತ್ತದೆ. ವಾರದ ಅಂತ್ಯಕ್ಕೆ ಸರಿಯುತ್ತಾ ಬಹಳ ಹತ್ತಿರದ ಸಂಬಂಧಿಗಳನ್ನು ಭೇಟಿ ಆಗಲಿದ್ದೀರಿ. ಹಣ ಹೂಡಿಕೆ ಲಾಭದಾಯಕವಾಗಿ ಪರಿಣಮಿಸಲಿದೆ. ಶುಭದಿನ: 02. ಶ್ರೀಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ನಿಮ್ಮ ಪಾಲಿನ ಕೆಲಸಗಳನ್ನು ವೇಗವಾಗಿ ಪೂರ್ಣಗೊಳಿಸುವಿರಿ. ಇದರಿಂದ ನಿಮ್ಮ ಬಡ್ತಿಗೆ ದಾರಿ ಗೋಚರಿಸಲಿದೆ. ಸಾಮಾಜಿಕ ಜೀವನದಲ್ಲಿ ವರ್ಚಸ್ಸು ವೃದ್ಧಿಯಾಗಲಿದೆ. ಸಂಗಾತಿಗೆ ಉಡುಗೊರೆ ನೀಡುವ ಬಗ್ಗೆ ಆಲೋಚನೆ ಮಾಡುತ್ತೀರಿ. ಸಂಬಂಧದಲ್ಲಿ ಸುಧಾರಣೆ ಕಾಣಿಸಲಿದೆ. ವಾರದ ದ್ವಿತೀಯಾರ್ಧದಲ್ಲಿ ಹಲವು ವಿಧದಲ್ಲಿ ಉತ್ತಮ ಫಲಿತಾಂಶವನ್ನು ಪಡೆಯಲಿದ್ದೀರಿ. ಶುಭದಿನ: 05. ಹನುಮಾನ್ ಚಾಲೀಸ್ ಪಠಿಸಿರಿ.




ಕೆಲವು ಗಂಭೀರ ವಿಚಾರಗಳಲ್ಲಿ ಮತ್ತು ಶೈಕ್ಷಣಿಕ ಸಂಗತಿಗಳಲ್ಲಿ ಪ್ರಗತಿ ಇದೆ. ಸೇವಾ ವಲಯದಲ್ಲಿ ಇರುವವರಿಗೆ ನಿರಂತರವಾದ ಪ್ರಗತಿ ಇದೆ. ಇದರಿಂದ ಅನುಕೂಲ ಪಡೆದುಕೊಳ್ಳಲು ಪ್ರಯತ್ನಿಸಿ. ಪ್ರತಿಷ್ಠೆಯನ್ನು ಹೆಚ್ಚು ಮಾಡಿಕೊಳ್ಳುವ ಕಡೆಗೆ ಪ್ರಯತ್ನಿಸಿ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಉತ್ತಮವಾಗಿರುತ್ತದೆ. ಉದ್ಯೋಗ ವ್ಯಾಪಾರ ವಿಚಾರಗಳು ಪ್ರಾಶಸ್ತ್ಯ ಪಡೆಯುತ್ತವೆ. ಶುಭದಿನ: 02. ಆದಿತ್ಯ ಹೃದಯ ಪಠಿಸಿರಿ.




ಹಿಂದೆಂದಿಗಿಂತ ಹೆಚ್ಚು ಸ್ಪರ್ಧಾತ್ಮಕವಾಗಿ ಇರುತ್ತೀರಿ. ಬಹಳ ಶ್ರಮಪಟ್ಟು, ಯಶಸ್ಸು ಪಡೆಯಬೇಕಾಗುತ್ತದೆ. ಸಂವಹನದ ಕೊರತೆ ಎದ್ದು ಕಾಣಲಿದೆ. ಇನ್ನು ವ್ಯಾಪಾರಿಗಳು ಉದ್ಯಮಿಗಳಿಗೆ ಹಲವು ಬಗೆಯಲ್ಲಿ ಸವಾಲುಗಳು ಎದುರಾಗಲಿವೆ. ಈ ಅವಧಿಯಲ್ಲಿ ಹೆಚ್ಚು ಹಣ ಖರ್ಚು ಮಾಡಲಿದ್ದೀರಿ. ವೈಯಕ್ತಿಕ ಸಂಬಂಧದಲ್ಲಿ ಭಿನ್ನಾಭಿಪ್ರಾಯ ಕಾಣಿಸಿಕೊಳ್ಳಲಿದೆ. ಶುಭದಿನ: 04. ಕಾಲಭೈರವನ ಆರಾಧನೆ ಮಾಡಿರಿ.




ನಿಮ್ಮ ಜವಾಬ್ದಾರಿಯನ್ನು ಪೂರೈಸುವುದಕ್ಕಾಗಿಯೇ ಹೆಚ್ಚು ಸಮಯವನ್ನು ಮೀಸಲಿಡಬೇಕಾಗುತ್ತದೆ. ನಿಮ್ಮ ಸಹೋದ್ಯೋಗಿಗಳು ಬಹಳ ಹೆಮ್ಮೆಪಡುತ್ತಾರೆ. ನಿಮ್ಮ ಸಾಮಾಜಿಕ ಸ್ಥಾನಮಾನ ಹೆಚ್ಚಲಿದೆ. ಜವಾಬ್ದಾರಿಗಳು ಕೂಡ ಜಾಸ್ತಿ ಆಗಲಿದೆ. ಆದಾಯ ಮೂಲಗಳಿಂದ ಹೆಚ್ಚು ಅನುಕೂಲ ಇದೆ. ಯಾವುದಾದರೂ ಮೂಲದಿಂದ ನಿಮಗೆ ಹಣ ಬರುವಂತಾಗುತ್ತದೆ. ಶುಭದಿನ: 30. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಭವಿಷ್ಯದ ನಿರ್ಧಾರದ ಬಗ್ಗೆ ವಾರದ ಶುರುವಿನಲ್ಲಿ ಹೆಚ್ಚಿನ ಸಮಯ ನೀಡುತ್ತೀರಿ. ದೂರ ಪ್ರದೇಶಗಳಿಗೆ ಪ್ರಯಾಣ ಮಾಡಬೇಕಾಗುತ್ತದೆ. ನಿಮ್ಮ ಪ್ರಯತ್ನಗಳನ್ನು ಹೆಚ್ಚು ಪರಿಣಾಮಕಾರಿಯಾಗಿ ಮಾಡಲು ಗಮನ ನೀಡುತ್ತೀರಿ. ಹಣ ಹೂಡಿಕೆಯಲ್ಲಿ ಲಾಭವಾಗುವ ಸಾಧ್ಯತೆ ಇದೆ. ವಾರದ ಅಂತ್ಯಕ್ಕೆ ಸರಿಯುತ್ತಾ ನಿಮ್ಮ ಗಮನ ಪೂರ್ತಿಯಾಗಿ ಮನೆ ಬಗ್ಗೆ ತಿರುಗುತ್ತದೆ. ಶುಭದಿನ: 02. ದತ್ತಗುರು ಚರಿತ್ರೆ ಪಠಿಸಿರಿ.